**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ರವರ ನ್ಯಾಯಾಲಯ,**
**ನಂಜನಗೂಡು**

**ಸಿಸಿ ಸಂಖ್ಯೆ : 1792/2019**

ಪಿರ್ಯಾದುದಾರರು : ಗ್ರಾಮಾಂತರ ಪೊಲೀಸ್ ಠಾಣೆ, ನಂಜನಗೂಡು.

**ವಿರುದ್ಧ**

ಆರೋಪಿ : ಮನಸಶೆಟ್ಟಿ ಬಿನ್ ಮೃತ ಮಾದಶೆಟ್ಟಿ,
ವಯಸ್ಸು ಸುಮಾರು 65 ವರ್ಷ,
ಹೆಗ್ಗಡಹಳ್ಳಿ ಗ್ರಾಮ,
ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.

:: **ದೋಷಾರೋಪಣೆ** ::

*ಶ್ರೀ ರಘುರಾಮ ಎನ್. ಎಸ್.,* ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಮೇಲ್ಕಂಡ ಆರೋಪಿಗಳಾದ ನಿಮ್ಮ ಮೇಲೆ ಈ ಕೆಳಕಂಡಂತೆ ಆರೋಪಗಳನ್ನು ನಿರೂಪಿಸುತ್ತಿದ್ದೇನೆ.

ದಿನಾಂಕ 31.03.2019 ರಂದು ಸಂಜೆ 18.30 ಗಂಟೆ ಸಮಯದಲ್ಲಿ ನಂಜನಗೂಡಿನ ಗ್ರಾಮಾಂತರ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಹೆಗ್ಗಡಹಳ್ಳಿ ಗ್ರಾಮದ ಉಪ್ಪಾರಶೆಟ್ಟಿ ಜನಾಂಗದ ಬೀದಿಯಲ್ಲಿ ಆರೋಪಿತರಾದ ತಮ್ಮ ಮನೆಯ ಮುಂಭಾಗದಲ್ಲಿ ಯಾವುದೇ ರಹದಾರಿ ಇಲ್ಲದೇ ಅಕ್ರಮವಾಗಿ ಒಂದು ಪ್ಲಾಸ್ಟಿಕ್ ಚೀಲದಲ್ಲಿ ಒಟ್ಟು ರೂ.2152.72 ಮೌಲ್ಯದ 90 ಎಂ.ಎಲ್. ನ 71 ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ಕಂಪನಿಯ ಟೆಟ್ರಾ ಪ್ಯಾಕೇಟ್‌ಗಳನ್ನು ಸ್ವಾಧೀನದಲ್ಲಿ ಇಟ್ಟು ಕೊಂಡಿದ್ದರಿಂದ ತಾವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಎರಡನೆಯದಾಗಿ, ಅದೇ ದಿನ, ವೇಳೆ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ತಾವು ಸರ್ಕಾರದ ಯಾವುದೇ ಪರವಾನಿಗೆ ಇಲ್ಲದೆ ಅಕ್ರಮವಾಗಿ ಒಂದು ಪ್ಲಾಸ್ಟಿಕ್ ಚೀಲದಲ್ಲಿ ಒಟ್ಟು ರೂ.2152.72 ಮೌಲ್ಯದ 90 ಎಂ.ಎಲ್. ನ 71 ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ಕಂಪನಿಯ ಟೆಟ್ರಾ ಪ್ಯಾಕೇಟ್‌ಗಳನ್ನು ಸ್ವಾಧೀನದಲ್ಲಿ ಇಟ್ಟುಕೊಂಡು ಮಾರಾಟ ಮಾಡಿ ಹಣ ಸಂಪಾದನೆ ಮಾಡುತ್ತಿದ್ದರಿಂದ ತಾವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 34 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಮೇಲ್ಕಂಡ ನಿಮ್ಮ ಮೇಲಿನ ಆರೋಪಣೆಯ ಬಗ್ಗೆ ವಿಚಾರಣೆಯಾಗಲು ಈ ಮೂಲಕ ಆದೇಶಿಸುತ್ತೇನೆ.

(ರಘುರಾಮ ಎನ್.ಎಸ್.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ. ನಂಜನಗೂಡು.